3. ಅರ್ಜಿಯನ್ನೊಪ್ಪಿಸುವುದು

ಶ್ರೀ ಕೆ. ಪ್ರಭಾಕರ ಬಂಗೇರ (ಬೆಳ್ತಂಗಡಿ ಕ್ಷೇತ್ರ) :— ಮಾನ್ಯ ಅಧ್ಯಕ್ಷರೇ, ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಕೊಕ್ಕಡ ಗ್ರಾಮದ ಶ್ರೀ ವೈದ್ಯನಾಥೇಶ್ವರ ದೇವಸ್ಥಾನಕ್ಕೆ ಸೇರಿರುವ ಕೆರೆಯಲ್ಲಿ ಹೂಳೆತ್ತುವ ಬಗ್ಗೆ ಅರ್ಜಿಯನ್ನು ಸಭೆಗೆ ಒಪ್ಪಿಸುತ್ತಿದ್ದೇವೆ.

ಅಧ್ಯಕ್ಷರು :— ಅರ್ಜಿಯನ್ನು ಒಪ್ಪಿಸಲಾಯಿತು.

4. ಗೈರು ಹಾಜರಿಗೆ ಅನುಮತಿ.

ಅಧ್ಯಕ್ಷರು :— ಶ್ರೀ ಸಿ. ವೆಂಕಟೇಶಪ್ಪನವರು ಬರೆದ ಪತ್ರವು ನನಗೆ ಬಂದಿದ್ದು, ಅದು ಈ ರೀತಿ ಇದೆ.

"ಶ್ರೀ ಸಿ. ವೆಂಕಟೇಶಪ್ಪನವರು ಅನಾರೋಗ್ಯದಿಂದ ದಿ: 10-9-00ರಿಂದ ಆಸ್ಪತ್ರೆಯಲ್ಲಿ ದಾಖಲಾಗಿರುವುದರಿಂದ, ದಿ: 28-10-00ರಿಂದ ದಿ: 17-11-00ದವರೆಗೆ ಸದನಕ್ಕೆ ಗೈರು ಹಾಜರಾಗಲು ಅನುಮತಿ ಕೋರಿದ್ದಾರೆ."

ಮಾನ್ಯ ಸದಸ್ಯರು ಗೈರು ಹಾಜರಾಗಲು ಸಭೆಯು ಸಮ್ಮತಿಸುತ್ತದೆಯೇ?

ಸಭೆಯು ಒಪ್ಪಿಗೆ ಸೂಚಿಸಿತು.

ಅಧ್ಯಕ್ಷರು :— ಗೈರು ಹಾಜರಿಗೆ ಅನುಮತಿ ನೀಡಲಾಗಿದೆ.

5. ಚುನಾವಣಾ ಪ್ರಸ್ತಾವ

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :— ದಿನಾಂಕ 10-11-2000ರಂದು ಕರ್ನಾಟಕ ವಿಧಾನಸಭೆಯ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮಗಳಂತೆ ವಿಧಾನಮಂಡಲದ ಹಾಗೂ ವಿಧಾನ ಸಭೆಯ ವಿವಿಧ ಸಮಿತಿಗಳಿಗೆ ಸದಸ್ಯರನ್ನು ಚುನಾಯಿಸಲು ಚುನಾವಣಾ ಪ್ರಸ್ತಾವವನ್ನು ಮಂಡಿಸಿದ್ದು, ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಕೆಳಕಂಡ ಪ್ರಸ್ತಾವನೆಯನ್ನು ಮಂಡಿಸಲು ಅನುಮತಿ ಕೋರುತ್ತಿದ್ದೇನೆ.

"ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಯ ನಿಯಮಾವಳಿಗಳಲ್ಲಿ ಸಮಿತಿಯ ಅಧಿಕಾರಾವಧಿಯ ನಿಯಮಗಳನ್ನು ತಾತ್ಕಾಲಿಕವಾಗಿ ತಡೆಹಿಡಿದು ಹಾಗೂ ಸದರಿ ಸಮಿತಿಗಳ ಅಧಿಕಾರಾವಧಿಯನ್ನು 31ನೇ ಮಾರ್ಚ್2001ರ ತನಕ ವಿಸ್ತರಿಸಲು ಸೂಚಿಸುತ್ತೇನೆ."